**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 713/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.06**

**ದಿನಾಂಕಃ 18.07.2025** **ಸಿಡಬ್ಲ್ಯೂ.04**

| | |
|---|---|
| ಹೆಸರು | ಸಂಗಯ್ಯ |
| ತಂದೆ ಹೆಸರು | ಶೇಖರಯ್ಯ |
| ವಯಸ್ಸು | 55 ವರ್ಷ |
| ಉದ್ಯೋಗ | ವ್ಯಾಪಾರ |
| ವಾಸ ಸ್ಥಳ | ಮಲೆಬೆನ್ನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ನನ್ನ ಹೆಂಡತಿ. ಚಾಸಾ.5 ಮತ್ತು 6 ರವರ ಪರಿಚಯವಿದೆ. ಆರೋಪಿತರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ.4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.4(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು ಕಚ್ಚಾ ನಕಾಶೆಯಾಗಿದ್ದು ಅದನ್ನು ಈಗಾಗಲೇ ನಿಪಿ.5 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.5(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾನು ಇರುವುದನ್ನು ಒಪ್ಪಿರುತ್ತಾರೆ. ಸದರಿ ಛಾಯ ಚಿತ್ರವನ್ನು ಈಗಾಗಲೇ ನಿಪಿ.6 ಎಂದು ಗುರುತಿಸಲಾಗಿದೆ. ಸದರಿ ಸಹಿಗಳನ್ನು ದಿಃ 27.10.2021 ರಂದು ಕಲ್ಲೇಶ್ವರ ಬಡಾವಣೆಯಲ್ಲಿ ಮಾಡಿರುತ್ತೇನೆ. ದಿಃ 25.10.2021 ರಂದು ನಮ್ಮ ಸೈಟ ನಂಬರ್ 184 ಆಸ್ತಿ ನಂ. 241 ರಲ್ಲಿ ಆರೋಪಿತರು ಅಕ್ರಮವಾಗಿ ಪ್ರವೇಶ ಮಾಡಿ ದನ ಕಟ್ಟಲು ಚಪ್ಪರ ಹಾಕುತ್ತಿದ್ದರು. ಆ ಸಂದರ್ಭದಲ್ಲಿ ನಾನು ಅವರಿಗೆ ಏಕೆ ಚಪ್ಪರ ಹಾಕುತ್ತಿದ್ದೀರಾ ಎಂದು ಕೇಳಿದ್ದಕ್ಕಾಗಿ ಆರೋಪಿತರು ನನ್ನೊಂದಿಗೆ ಗಲಾಟೆ ಮಾಡಿ 3 ಜನ ಸೇರಿ ನನ್ನ ಕೈಕಾಲುಗಳಿಗೆ ಅವರ ಕೈ ಕಾಲುಗಳಿಂದ ಹೊಡೆದರು. ಸದರಿ ಸಂದರ್ಭದಲ್ಲಿ ನನ್ನ ಹೆಂಡತಿ ಚಾಸಾ.1 ಏಕೆ ಹೀಗೆ ಮಾಡುತ್ತಿದ್ದೀರಾ ಎಂದು ಕೇಳಲು ಬಂದರು. ಆಗ 1 ಮತ್ತು 2 ನೇ ಆರೋಪಿತರು ಚಾಸಾ.1 ರವರ ಬಟ್ಟೆ ಹಿಡಿದು ಎಳೆದಾಡಿ ಅವಮಾನ ಮಾಡಿದರು. ಚಾಸಾ.5 ಮತ್ತು 6 ರವರು ಜಗಳ ಬಿಡಿಸಿದರು. ಆಗ ನಾವು ಮರಳಿ ಆಸ್ಪತ್ರೆಗೆ ಹೋಗುವ ಸಂದರ್ಭದಲ್ಲಿ ಆರೋಪಿತರು ಸೇರಿ ನಿಮ್ಮನ್ನು ಜೀವ ಸಹಿತ ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿದರು. ಅದೇ ದಿನ ಮಲೆಬೆನ್ನೂರು ಸರ್ಕಾರಿ ಆಸ್ಪತ್ರೆಯಲ್ಲಿ ನಾನು ಚಿಕಿತ್ಸೆ ಪಡೆದುಕೊಂಡೆನು. ಅದೇ ದಿನ ರಾತ್ರಿ 9.00 ಗಂಟೆಗೆ ಠಾಣೆಗೆ ಹೋಗಿ ತಿಳಿಸಿದೆವು. ನಂತರ ಮಾರನೇ ದಿನ ಬೆಳಿಗ್ಗೆ ದೂರು ದಾಖಲಿಸಿಕೊಂಡರು. ದೂರು ದಾಖಲಿಸಿದ ನಂತರ ಪೊಲೀಸರು ಸ್ಥಳಕ್ಕೆ ಬೇಟಿ ನೀಡಿ ಮೇಲೆ ಹೇಳಿದಂತೆ ಪಂಚನಾಮೆ ಜರುಗಿಸಿ ಛಾಯ ಚಿತ್ರ ತೆಗೆದಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಗೈರು ಹಾಜರಿದ್ದು, ಆರೋಪಿ ಕಾಲಾವಕಾಶ ಕೋರಿದ್ದು ಸಕಾರಣಗಳು ಇಲ್ಲದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ

**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**
**ಸಿ.ಸಿ. 713/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.05**
**ದಿನಾಂಕಃ 18.07.2025** **ಸಿಡಬ್ಲ್ಯೂ.02**

| | |
|---|---|
| ಹೆಸರು | ಉಮೇಶ |
| ತಂದೆ ಹೆಸರು | ಬಸಪ್ಪ |
| ವಯಸ್ಸು | 55 ವರ್ಷ |
| ಉದ್ಯೋಗ | ಚಾಲಕ |
| ವಾಸ ಸ್ಥಳ | ಮಲೆಬೆನ್ನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.3 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ.4 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.4(ಬಿ)ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು ಕಚ್ಚಾ ನಕಾಶೆಯಾಗಿದ್ದು ಅದನ್ನು ಈಗಾಗಲೇ ನಿಪಿ.5 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.5(ಬಿ)ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾನು ಇರುವುದನ್ನು ಒಪ್ಪಿರುತ್ತಾರೆ. ಸದರಿ ಛಾಯ ಚಿತ್ರವನ್ನು ಈಗಾಗಲೇ ನಿಪಿ.6 ಎಂದು ಗುರುತಿಸಲಾಗಿದೆ. ಸದರಿ ಸಹಿಗಳನ್ನು 2021 ರಲ್ಲಿ ಕಲ್ಲೇಶ್ವರ ಬಡಾವಣೆಯಲ್ಲಿ ಮಾಡಿರುತ್ತೇನೆ. ಯಾವ ವಿಚಾರವಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 27.10.2021 ರಂದು ಮಲೆಬೆನ್ನೂರು ಠಾಣಾ ವ್ಯಾಪ್ತಿಯ ಕಲ್ಲೇಶ್ವರ ಬಡಾವಣೆಯಲ್ಲಿರುವ ಚಾಸಾ.4 ರವರ ಮನೆಯ ಮುಂದೆ ಪೊಲೀಸರು ನನ್ನನ್ನು ಮತ್ತು ಚಾಸಾ.3 ರವರನ್ನು ಕರೆಸಿ ಪ್ರಕರಣದ ವಿದ್ಯಮಾನ ತಿಳಿಸಿ ಪಂಚರಾಗಿ ಸಹಕರಿಸಿ ಎಂದು ಕೇಳಿಕೊಂಡ ಮೇರೆಗೆ ನಾವು ಒಪ್ಪಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಮ್ಮಗಳ ಸಮಕ್ಷಮ ಚಾಸಾ.1,4 ಮತ್ತು ಆರೋಪಿತರ ನಡುವೆ ಜಗಳದ ವಿಚಾರವಾಗಿ ಪೊಲೀಸರು ನಿಪಿ.4 ರಂತೆ ಪಂಚನಾಮೆ ಜರುಗಿಸಿ ನಿಪಿ.5 ರಂತೆ ಕಚ್ಚಾ ನಕಾಶೆ ಬಿಡಿಸಿ ನಿಪಿ.6 ರಂತೆ ಛಾಯ ಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರ ಗೊತ್ತಿದ್ದರೂ

ಸಹ ಆರೋಪಿಗೆ ಶಿಕ್ಷೆ ಆಗಬಾರದು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈ ವಿಚಾರವಾಗಿ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ನಿಪಿ.8 ಎಂದು ಗುರುತಿಸಲಾಯಿತು.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

ಸಿ.ಸಿ. 713/2023

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.04**

**ದಿನಾಂಕಃ** 18.07.2025 **ಸಿಡಬ್ಲ್ಯೂ.03**

| | |
|---|---|
| ಹೆಸರು | ಹನುಮಂತಪ್ಪ |
| ತಂದೆ ಹೆಸರು | ಬಸವಣ್ಣೆಪ್ಪ |
| ವಯಸ್ಸು | 50 ವರ್ಷ |
| ಉದ್ಯೋಗ | ಚಾಲಕ |
| ವಾಸ ಸ್ಥಳ | ಮಲೆಬೆನ್ನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.2 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ನಿಪಿ.4 ಎಂದು ಸಾಕ್ಷಿಯ ಸಹಿಯನ್ನು ನಿಪಿ.4(ಎ)ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು ಕಚ್ಚಾ ನಕಾಶೆಯಾಗಿದ್ದು ಅದನ್ನು ನಿಪಿ. 5 ಎಂದು ಸಾಕ್ಷಿಯ ಸಹಿಯನ್ನು ನಿಪಿ.5(ಎ)ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾನು ಇರುವುದನ್ನು ಒಪ್ಪಿರುತ್ತಾರೆ. ಸದರಿ ಛಾಯ ಚಿತ್ರವನ್ನು ನಿಪಿ.6 ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು 2021 ರಲ್ಲಿ ಕಲ್ಲೇಶ್ವರ ಬಡಾವಣೆಯಲ್ಲಿ ಸೈಟಿನ ವಿಚಾರವಾಗಿ ಮಾಡಿರುತ್ತೇನೆ. ಸದರಿ ಸಂದರ್ಭದಲ್ಲಿ ಬೆಳಿಗ್ಗೆ 10.30 ಗಂಟೆ ಯಾಗಿತ್ತು. ಈ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 27.10.2021 ರಂದು ಮಲೆಬೆನ್ನೂರು ಠಾಣಾ ವ್ಯಾಪ್ತಿಯ ಕಲ್ಲೇಶ್ವರ ಬಡಾವಣೆಯಲ್ಲಿರುವ ಚಾಸಾ.4 ರವರ ಮನೆಯ ಮುಂದೆ ಪೊಲೀಸರು ನನ್ನನ್ನು ಮತ್ತು ಚಾಸಾ.2 ರವರನ್ನು ಕರೆಸಿ ಪ್ರಕರಣದ ವಿದ್ಯಮಾನ ತಿಳಿಸಿ ಪಂಚರಾಗಿ ಸಹಕರಿಸಿ ಎಂದು ಕೇಳಿಕೊಂಡ ಮೇರೆಗೆ ನಾವು ಒಪ್ಪಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಮ್ಮಗಳ ಸಮಕ್ಷಮ ಚಾಸಾ.1,4 ಮತ್ತು ಆರೋಪಿತರ ನಡುವೆ ಜಗಳದ ವಿಚಾರವಾಗಿ ಪೊಲೀಸರು ನಿಪಿ.4 ರಂತೆ ಪಂಚನಾಮೆ ಜರುಗಿಸಿ ನಿಪಿ.5 ರಂತೆ ಕಚ್ಚಾ ನಕಾಶೆ ಬಿಡಿಸಿ ನಿಪಿ.6 ರಂತೆ ಛಾಯ ಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರ ಗೊತ್ತಿದ್ದರೂ

ಸಹ ಆರೋಪಿಗೆ ಶಿಕ್ಷೆ ಆಗಬಾರದು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಈ ವಿಚಾರವಾಗಿ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ನಿಪಿ.7 ಎಂದು ಗುರುತಿಸಲಾಯಿತು.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ